ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಬೆಳಗಾವಿ ಉತ್ತರ ವಲಯದ ಚಿಕ್ಕೋಡಿಯಲ್ಲಿ ಉಪನಿರ್ದೇಶಕರ ಕಛೇರಿಯನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಸದಲಗಾದ ಕ್ಷೇತ್ರದಲ್ಲಿ ಬಿ.ಇ.ಓ. ಕಛೇರಿಯನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಆ) ಮೇಲಿನ ಪ್ರಸ್ತಾವನೆಗೆ ಅನುಮೋದನೆ ದೊರೆತ ನಂತರ ಆದೇಶ ಹೊರಡಿಸಲಾಗುವುದು.

ಪರೀಕ್ಷಾ ಪದ್ಧತಿಗಳಲ್ಲಿನ ಅವ್ಯವಸ್ಥೆ

4624 - ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿಯಲ್ಲಿ ಪರೀಕ್ಷೆ ವ್ಯವಸ್ಥೆಯಲ್ಲಿ ಹಾಲ್ ಟಿಕೇಟುಗಳು, ಫಲಿತಾಂಶಗಳು ವಿತರಣೆಯಾಗದೇ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಇದರ ಸುಧಾರಣೆಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಆದಾಗ್ಯೂ ಹೆಚ್ಚಿನ ಸುಧಾರಣೆಗಾಗಿ ಪರೀಕ್ಷಾ ವ್ಯವಸ್ಥೆ ಪೂರ್ಣ ಗಣಕೀಕರಣ ಕ್ಷೇತ್ರ ಶಿಕ್ಷಣ ಅಧಿಕಾರಿಗಳ ಹಂತದಲ್ಲೇ ಹಾಲ್‌ಟಿಕೇಟ್, ಅಂಕಪಟ್ಟಿ ವಿತರಣೆ ವ್ಯವಸ್ಥೆ ಮಾಡಲಾಗುತ್ತದೆ.

ಸಾರ್ವಜನಿಕ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳು

4625 - ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉಡುಪಿ ಜಿಲ್ಲೆಯಲ್ಲಿ ಸಾರ್ವಜನಿಕ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ಹುದ್ದೆವಾರು ವಿವರ ಒದಗಿಸುವುದು)*

ಆ) *ಸದರಿ ಹುದ್ದೆಗಳು ತೆರವಾಗಿರುವುದರಿಂದ ಆಸ್ಪತ್ರೆಗಳಲ್ಲಿ ಸರಿಯಾದ ಸೇವೆ ದೊರಕುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?*

ಇ) *ಸದರಿ ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?*